# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಶನಿವಾರ, ೧೭, ಜನವರಿ, ೨೦೨೬(ಪುಷ್ಯ, ೨೭, ಶಕವರ್ಷ, ೧೯೪೭)<br>BENGALURU, SATURDAY, 17, JANUARY, 2026(PUSHYA , 27, SHAKAVARSHA, 1947) | ನಂ. ೬೬<br>No.66 |
|---|---|---|

## ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

2ನೇ ಮತ್ತು 3 ನೇ ಮಹಡಿ, ನಂ 16 ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080,

ಇ ಮೇಲ್- sec.karnataka@ka.gov.in ದೂರವಾಣಿ: 080-22205189/93

### ಅಧಿಸೂಚನೆ

**ಸಂಖ್ಯೆ: SECK/ULB/GELN(GBA)/1/2025-ULB E- 247649, ಬೆಂಗಳೂರು** **ದಿನಾಂಕ: 17.01.2026**

ಭಾರತ ಸಂವಿಧಾನದ ಅನುಚ್ಛೇದ 243 ಜೆಡ್ ಎ ಯೊಂದಿಗೆ ಓದಲಾದ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಪ್ರಕರಣ 34 ಮತ್ತು ಗ್ರೇಟರ್ ಬೆಂಗಳೂರು ಆಡಳಿತ (ಚುನಾವಣೆ) ನಿಯಮಗಳು, 2025ರ ನಿಯಮ 3ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ 5 ನಗರ ಪಾಲಿಕೆಗಳಿಗೆ ಚುನಾವಣೆಯನ್ನು ನಡೆಸುವ ಸಲುವಾಗಿ ಈಗಾಗಲೇ ಜಿಲ್ಲಾ ಚುನಾವಣಾ ಅಧಿಕಾರಿ ಮತ್ತು ಅಪರ ಜಿಲ್ಲಾ ಚುನಾವಣಾ ಅಧಿಕಾರಿಗಳನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಅಂತೆಯೇ ಗ್ರೇಟರ್ ಬೆಂಗಳೂರು ಪ್ರಾಧಿಕಾರದ 05 ನಗರ ಪಾಲಿಕೆಗಳ ವ್ಯಾಪ್ತಿಯ ವಾರ್ಡುಗಳಿಗೆ ಮತದಾರರ ಪಟ್ಟಿ ತಯಾರಿಸುವ ಕಾರ್ಯಕ್ಕಾಗಿ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಪ್ರಕರಣ 36 ಮತ್ತು ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 2(ಬಿ)(ಡಿ) ರನ್ವಯ ನಗರ ಪಾಲಿಕೆಗಳ ವಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಂದಾಯ ಅಧಿಕಾರಿಗಳನ್ನು ಮತದಾರರ ನೋಂದಣಿ ಅಧಿಕಾರಿ ಹಾಗೂ ಸಹಾಯಕ ಕಂದಾಯ ಅಧಿಕಾರಿಗಳನ್ನು ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಮತದಾರರ ನೋಂದಣಿ ಅಧಿಕಾರಿಯು ತೆಗೆದುಕೊಳ್ಳುವ ತೀರ್ಮಾನದಿಂದ ಬಾಧಿತರಾದ ಮತದಾರರು ಅಪೀಲು ಸಲ್ಲಿಸಲು ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 22 ರಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಕರಡು ವಾರ್ಡುವಾರು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸ್ವೀಕೃತವಾಗುವ ಕ್ಲೇಮುಗಳು ಮತ್ತು ಆಕ್ಷೇಪಣೆಗಳನ್ನು ನಿರ್ಧರಿಸುವ ಸಲುವಾಗಿ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಪ್ರಕರಣ 36 ಮತ್ತು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 22(1) ರನ್ವಯ, ಈ ಕೆಳಕಂಡ ಕೋಷ್ಟಕದಂತೆ ಅಪೀಲು ಅಧಿಕಾರಿಗಳನ್ನು ಗೊತ್ತುಪಡಿಸಿ, ಆದೇಶಿಸಿದೆ.

| ಅಪೀಲು ಅಧಿಕಾರಿ | ನಗರ ಪಾಲಿಕೆಯ ಹೆಸರು | ವಾರ್ಡ್‌ಗಳು |
|---|---|---|
| 1 | 2 | 3 |
| ಆಯುಕ್ತರು ಮತ್ತು ಅಪರ ಜಿಲ್ಲಾಚುನಾವಣಾಧಿಕಾರಿ, ಬೆಂಗಳೂರು ಕೇಂದ್ರ ನಗರ ಪಾಲಿಕೆ | ಬೆಂಗಳೂರು ಕೇಂದ್ರ ನಗರ ಪಾಲಿಕೆ | ಎಲ್ಲಾ ವಾರ್ಡುಗಳು |
| ಆಯುಕ್ತರು ಮತ್ತು ಅಪರ ಜಿಲ್ಲಾಚುನಾವಣಾಧಿಕಾರಿ, ಬೆಂಗಳೂರು ಉತ್ತರ ನಗರ ಪಾಲಿಕೆ | ಬೆಂಗಳೂರು ಉತ್ತರ ನಗರ ಪಾಲಿಕೆ | ಎಲ್ಲಾ ವಾರ್ಡುಗಳು |
| ಆಯುಕ್ತರು ಮತ್ತು ಅಪರ ಜಿಲ್ಲಾಚುನಾವಣಾಧಿಕಾರಿ, ಬೆಂಗಳೂರು ದಕ್ಷಿಣ ನಗರ ಪಾಲಿಕೆ | ಬೆಂಗಳೂರು ದಕ್ಷಿಣ ನಗರ ಪಾಲಿಕೆ | ಎಲ್ಲಾ ವಾರ್ಡುಗಳು |
| ಆಯುಕ್ತರು ಮತ್ತು ಅಪರ ಜಿಲ್ಲಾಚುನಾವಣಾಧಿಕಾರಿ, ಬೆಂಗಳೂರು ಪೂರ್ವ ನಗರ ಪಾಲಿಕೆ | ಬೆಂಗಳೂರು ಪೂರ್ವ ನಗರ ಪಾಲಿಕೆ | ಎಲ್ಲಾ ವಾರ್ಡುಗಳು |
| ಆಯುಕ್ತರು ಮತ್ತು ಅಪರ ಜಿಲ್ಲಾಚುನಾವಣಾಧಿಕಾರಿ, ಬೆಂಗಳೂರು ಪಶ್ಚಿಮ ನಗರ ಪಾಲಿಕೆ | ಬೆಂಗಳೂರು ಪಶ್ಚಿಮ ನಗರ ಪಾಲಿಕೆ | ಎಲ್ಲಾ ವಾರ್ಡುಗಳು |

**ಸಹಿ/-**

**ಡಾ. ಎನ್.ಆರ್.ನಾಗರಾಜು ಕ.ಆ.ಸೇ.**

**ಕಾರ್ಯದರ್ಶಿ (ಪ್ರ),**

**ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.**

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH